






# ದ ರೂರಲ್ ಮಿರರ್.ಕಾಂ


# ಜಾಗತಿಕ ಹವಾಮಾನ ವೈಪರೀತ್ಯದ ಸಂಕಷ್ಟ



ಕಳೆದ ಒಂದು ವಾರದಿಂದ ಜಗತ್ತಿನಾದ್ಯಂತ ತೀವ್ರ ಹವಾಮಾನ ವೈಪರೀತ್ಯಗಳು ಉಂಟಾಗಿದ್ದು, ಭೀಕರ ಮಳೆ, ಪ್ರವಾಹ ಮತ್ತು ಕಾಡ್ಗಿಚ್ಚು ಲಕ್ಷಾಂತರ ಜನರ ಮೇಲೆ ಪರಿಣಾಮ ಬೀರಿವೆ. ಪಾಕಿಸ್ತಾನ ಮತ್ತು ದಕ್ಷಿಣ ಕೊರಿಯಾದಿಂದ ಸ್ಪೇನ್, ಫ್ರಾನ್ಸ್ ಮತ್ತು ಸೈಬೀರಿಯಾದವರೆಗೆ ಭೀಕರ ಮಳೆ, ಪ್ರವಾಹ ಮತ್ತು ಕಾಡ್ಗಿಚ್ಚುಗಳು ಜನರ ಮೇಲೆ ಪರಿಣಾಮ ಬೀರಿವೆ. ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ, ಕಳೆದ 24 ಗಂಟೆಗಳಲ್ಲಿ ಭಾರೀ ಮಳೆಯಿಂದಾಗಿ ಕನಿಷ್ಠ 63 ಜನರು ಸಾವನ್ನಪ್ಪಿದ್ದಾರೆ ಮತ್ತು ಸುಮಾರು 300 ಜನರು ಗಾಯಗೊಂಡಿದ್ದಾರೆ. ರಾಷ್ಟ್ರವ್ಯಾಪಿ, ಜೂನ್ ಅಂತ್ಯದಿಂದ ಸಾವಿನ ಸಂಖ್ಯೆ 159 ಕ್ಕೆ ತಲುಪಿದ್ದು, ಉತ್ತರದಲ್ಲಿ ಹೆಚ್ಚಿನ ಮಳೆಯಾಗುವ ಮುನ್ಸೂಚನೆ ಇದೆ.

ದಕ್ಷಿಣ ಕೊರಿಯಾ ಕೂಡ ನಿರಂತರ ಮಳೆಯಿಂದ ಬಳಲುತ್ತಿದೆ, ಈಗ ಮೂರನೇ ದಿನವಾಗಿದೆ. ನಾಲ್ಕು ಜನರು ಸಾವನ್ನಪ್ಪಿದ್ದಾರೆ ಮತ್ತು 5,000 ಕ್ಕೂ ಹೆಚ್ಚು ಜನರು ಸ್ಥಳಾಂತರಗೊಂಡಿದ್ದಾರೆ. ಸಿಯೋಸಾನ್‌ನಲ್ಲಿ 400 ಮಿಮೀ ಮಳೆಯಾಗಿದ್ದು, ಶನಿವಾರದವರೆಗೆ ಮತ್ತಷ್ಟು ಭೂಕುಸಿತ ಮತ್ತು ಪ್ರವಾಹದ ಬಗ್ಗೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ರಷ್ಯಾದ ಪೂರ್ವ ಸೈಬೀರಿಯಾದಲ್ಲಿ, ತುರ್ತು ತಂಡಗಳು ತೀವ್ರ ಪ್ರವಾಹವನ್ನು ಎದುರಿಸುತ್ತಿವೆ, ನದಿ ಮಟ್ಟ ಏರುತ್ತಿದ್ದಂತೆ 200 ಕ್ಕೂ ಹೆಚ್ಚು ಸಿಬ್ಬಂದಿ ಮತ್ತು 60 ವಾಹನಗಳನ್ನು ನಿಯೋಜಿಸಿವೆ.

ದಕ್ಷಿಣ ಯುರೋಪ್ ಭೀಕರ ಕಾಡ್ಗಿಚ್ಚನ್ನು ಎದುರಿಸುತ್ತಿದೆ. ಸ್ಪೇನ್‌ನಲ್ಲಿ, ಮ್ಯಾಡ್ರಿಡ್ ಬಳಿ ಬೆಂಕಿಯು 3,000 ಹೆಕ್ಟೇರ್‌ಗಳಿಗೂ ಹೆಚ್ಚು ಸುಟ್ಟುಹೋಗಿದೆ, ಮೆಂಟ್ರಿಡಾ ಪಟ್ಟಣದ ಬಳಿ ಬಲವಾದ ಗಾಳಿಯಿಂದ ಆವೃತವಾಗಿದೆ. ಫ್ರಾನ್ಸ್‌ನಲ್ಲಿ, ಮಾರ್ಸಿಲ್ಲೆಯ ವಾಯುವ್ಯದಲ್ಲಿರುವ ಮಾರ್ಟಿಗ್ಸ್ ಬಳಿ 1,000 ಅಗ್ನಿಶಾಮಕ ದಳದವರು ಕಾಡ್ಗಿಚ್ಚನ್ನು ನಿಯಂತ್ರಣ ಮಾಡುತ್ತಿದ್ದಾರೆ. ಅಲ್ಲಿ 150 ಜನರನ್ನು ಸ್ಥಳಾಂತರಿಸಲಾಗಿದೆ.


ಹೆಚ್ಚಿನ ಓದಿಗೆ : www.theruralmirror.com


## ಕಬ್ಬು ಬೆಳೆಗಾರರ ವಿಚಾರ ಸಂಕಿರಣ ಕಬ್ಬಿಗೆ ದರ ನಿಗದಿಗೆ ಒತ್ತಾಯ




ಭಾರತೀಯ ಕಿಸಾನ್ ಸಂಘ, ಕರ್ನಾಟಕ  ಪ್ರದೇಶ, ರಾಜ್ಯ ಕಬ್ಬು ಬೆಳೆಗಾರರ ವೇದಿಕೆಯು ಜಂಟಿಯಾಗಿ ಮಂಡ್ಯದಲ್ಲಿ ನಿನ್ನೆ ವಿಚಾರ ಸಂಕಿರಣಹಮ್ಮಿಕೊಂಡಿದ್ದವು. ಭಾರತೀಯ ಕಿಸಾನ್ ಸಂಘ ದಕ್ಷಿಣ ಪ್ರಾಂತಿಯ ಅಧ್ಯಕ್ಷ ಹಾಡ್ಯ ರಮಶ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿಸಾವಯವ ಕೃಷಿ ಇಲಾಖೆ ಕಾರ್ಯದರ್ಶಿ ನಾರಾಯಣ ಸ್ವಾಮಿ, ಪ್ರಧಾನ ಕಾರ್ಯದರ್ಶಿ ಸೋಮಶೇಖರ್. ದಕ್ಷಿಣ ಪ್ರಾಂತ್ಯ ಸಂಘಟನೆಗಾರ ಪುಟ್ಟಮ್ಮ ಶ್ರೀಕಂಠ. ವಿಜ್ಞಾನಿ ಸ್ವಾಮಿಗೌಡ ಉಪಸ್ಥಿತರಿದ್ದರು.

## ಪರಿಹಾರ ಒದಗಿಸಲು ನಿರ್ಧಾರ

ಕೇಂದ್ರ ಸರ್ಕಾರ ಸ್ವಾಮ್ಯದ ಮಂಗಳೂರು ರಿಫೈನರಿ ಮತ್ತು ಪೆಟ್ರೋಕೆಮಿಕಲ್ಸ್ ಲಿಮಿಟೆಡ್ ಸಂಸ್ಥೆಯು ಹಸಿರು ವಲಯ ನಿರ್ಮಾಣ ಸಂಬಂಧ 27 ಎಕರೆ ಭೂಸ್ವಾಧೀನಕ್ಕೆ ಭೂಮಾಲಿಕರಿಗೆ ಸೂಕ್ತ ಪರಿಹಾರ ಒದಗಿಸಲು ನಿರ್ಧರಿಸಿದೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ಲೋಕಸಭಾ ಸದಸ್ಯ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ನಿರ್ಧರಿಸಲಾಯಿತು. ಪ್ರತಿ ಎಕರೆಗೆ 80 ಲಕ್ಷ ರೂಪಾಯಿ ಪರಿಹಾರ, ಉದ್ಯೋಗ ಬದಲು ಪ್ರತಿ ಕುಟುಂಬಕ್ಕೆ 20 ಲಕ್ಷ ರೂಪಾಯಿ ನಗದು ಮತ್ತು ನಿವೇಶನ ಸೇರಿದಂತೆ ಪರಿಹಾರ ನೀಡಲು ಎಂಆರ್‌ಪಿಎಲ್ ಜಿಲ್ಲಾಡಳಿತಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಜಿಲ್ಲಾಧಿಕಾರಿ ದರ್ಶನ್ ಎಚ್.ವಿ.ಮಾತನಾಡಿ, ಎಂಆರ್‌ಪಿಲ್ ಸಲ್ಲಿಸಿರುವ ಪ್ಯಾಕೇಜ್ ಬಗ್ಗೆ ಶೀಘ್ರದಲ್ಲೇ ಅಂತಿಮ ನಿರ್ಧಾರಕ್ಕೆ ಬರಲಾಗುವುದು ಎಂದು ತಿಳಿಸಿದರು.

## ಭಾರೀ ಮಳೆ ಮುನ್ಸೂಚನೆ ರೆಡ್ ಅಲರ್ಟ್



ಭಾರೀ ಮಳೆ ಮುನ್ಸೂಚನೆ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ ರಾಜ್ಯದ ಕರಾವಳಿ ಹಾಗೂ ಕೇರಳದಲ್ಲಿ ರೆಡ್ ಅಲರ್ಟ್ ಘೋಷಿಸಿದೆ. ಮುಂದಿನ ಆರು ದಿನಗಳ ಕಾಲ ಕರ್ನಾಟಕ, ಕೇರಳ ಮತ್ತು ತಮಿಳುನಾಡು ರಾಜ್ಯಗಳಲ್ಲಿ ಭಾರೀ ಮಳೆ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಮೂರು ದಿನಗಳು ಒಡಿಶಾ, ಛತ್ತೀಸ್‌ಗಢ, ಪಶ್ಚಿಮ ಬಂಗಾಳ, ಅಸ್ಸಾಂ, ತ್ರಿಪುರಾ ಸೇರಿದಂತೆ ಈಶಾನ್ಯ ಭಾರತದ ಹಲವು ರಾಜ್ಯಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

# ವಿಷ್ಣುಗುಪ್ತ ವಿವಿಗೆ ಕರ್ಣಾಟಕ ಬ್ಯಾಂಕ್ ಕೊಡುಗೆ



ಅಶೋಕೆಯ ವಿಷ್ಣುಗುಪ್ತ ವಿಶ್ವವಿದ್ಯಾಪೀಠದ ಆವರಣದಲ್ಲಿ ಭಾರತೀಯ ಸಂಸ್ಕೃತಿಯ ಬಗ್ಗೆ ಆಳವಾದ ಸಂಶೋಧನೆ ಕೈಗೊಳ್ಳುವ ಉದ್ದೇಶದಿಂದ ಕರ್ಣಾಟಕ ಬ್ಯಾಂಕ್ 55 ಲಕ್ಷ ರೂಪಾಯಿ ವೆಚ್ಚದಲ್ಲಿ ಸಂಶೋಧನಾ ಕೇಂದ್ರ ನಿರ್ಮಿಸಿಕೊಟ್ಟಿದೆ ಎಂದು ಹೊಸನಗರ ಶ್ರೀ ರಾಮಚಂದ್ರಾಪುರ ಮಠದ ಶ್ರೀ ರಾಘವೇಶ್ವರಭಾರತೀ ಮಹಾಸ್ವಾಮೀಜಿ ಹೇಳಿದರು. ಅಶೋಕೆಯಲ್ಲಿ ಚಾತುರ್ಮಾಸ್ಯ ವ್ರತ ಕೈಗೊಂಡಿರುವ ಶ್ರೀಗಳು ಭಾನುವಾರ ಆಶೀರ್ವಚನ ನೀಡಿ, ಈ ಸಂಶೋಧನಾ ಕೇಂದ್ರವನ್ನು ಪ್ರಾಯೋಜಿಸುವ ಮೂಲಕ ಕರ್ಣಾಟಕ ಬ್ಯಾಂಕ್ ನಿಜ ಅರ್ಥದಲ್ಲಿ ಸಾಮಾಜಿಕ ಹೊಣೆಗಾರಿಕೆ ಮೆರೆದಿದೆ. ದೇಶದ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಬ್ಯಾಂಕಿನ ಕೊಡುಗೆ ಶ್ಲಾಘನೀಯ ಎಂದರು. ಮಠ ಎಂಬ ಶಬ್ದಕ್ಕೆ ವಿದ್ಯಾರ್ಥಿಗಳಿರುವ ಸ್ಥಾನ ಎಂಬ ವಿವರಣೆ ಕೋಶದಲ್ಲಿದೆ. ಮಠಕ್ಕೆ ಮಹತ್ವ ಸಿದ್ಧಿಸುವುದೇ ವಿದ್ಯಾರ್ಥಿಗಳಿಂದ. ಆದ್ದರಿಂದಲೇ ಇಲ್ಲಿನ ಮೂಲಮಠ ಅಭಿವೃದ್ಧಿಪಡಿಸುವುದಕ್ಕೆ ಪೂರ್ವಭಾವಿಯಾಗಿ ಗುರುಕುಲಗಳ ಸಮುಚ್ಛಯ ಅಂದರೆ ವಿಷ್ಣುಗುಪ್ತ ವಿಶ್ವವಿದ್ಯಾಪೀಠ ಸ್ಥಾಪನೆಯಾಗಿದೆ ಎಂದು ಬಣ್ಣಿಸಿದರು.

ಯಾವುದೇ ಸರ್ಕಾರಿ ಅನುದಾನವಿಲ್ಲದೇ ಸಮಾಜದ ಭಿಕ್ಷೆಯಿಂದಲೇ ಈ ಸತ್ಕಾರ್ಯಗಳು ನಡೆಯುತ್ತಿವೆ. ಇದಕ್ಕಾಗಿಯೇ ಛಾತ್ರಭಿಕ್ಷೆ ಎಂಬ ವಿಶಿಷ್ಟ ಪರಿಕಲ್ಪನೆ ರೂಪುಗೊಂಡಿದೆ. ಛಾತ್ರಭಿಕ್ಷೆಯಲ್ಲಿ ಸಮಾಜದ ಮಾತೆಯರು ಇಲ್ಲಿನ ವಿದ್ಯಾರ್ಥಿಗಳಿಂದ ಪೂಜೆಗೊಳ್ಳುತ್ತಾರೆ. ಮಾತೆಯರು ಪ್ರತಿಯಾಗಿ ಛಾತ್ರರಿಗೆ ಭಿಕ್ಷೆ ನೀಡುತ್ತಾರೆ. ಇಂದಿನ ಛಾತ್ರಭಿಕ್ಷೆಯಲ್ಲಿ ಕುಮಟಾ ಮಂಡಲದಿಂದ 120 ಮಾತೆಯರು ಇಂದಿನ ಛಾತ್ರಭಿಕ್ಷೆಯಲ್ಲಿ ಪಾಲ್ಗೊಂಡಿದ್ದಾರೆ ಎಂದರು. ಗುರುಕುಲದ ಮಕ್ಕಳಿಗೆ ಮಾತೃಸ್ಥಾನದಲ್ಲಿ ನಿಂತು ಮಾತೆಯರು ಆದರ್ಶ ಮೆರೆದಿದ್ದಾರೆ. ಮಾತೆಯರ ಕೊಡುಗೆ ಛಾತ್ರರಿಗೆ ಮಾತ್ರವಲ್ಲದೇ ಗುರುಕುಲಕ್ಕೂ ಭಿಕ್ಷೆ ಎಂದು ಬಣ್ಣಿಸಿದರು.

ಕರ್ಣಾಟಕ ಬ್ಯಾಂಕಿನ ಮಹಾಪ್ರಬಂಧಕ ಬಿ.ಎಸ್.ರಾಜಾ, ಉಪ ಮಹಾಪ್ರಬಂಧಕ ಕೆ.ಶ್ಯಾಮ್, ಸಹಾಯಕ ಮಹಾಪ್ರಬಂಧಕ ವಾದಿರಾಜ, ಗೋಕರ್ಣ ಶಾಖೆಯ ಪ್ರಬಂಧಕ ಪರಮೇಶ್ವರ ಹೆಗಡೆ ಅವರು ಶ್ರೀಗಳಿಂದ ಆಶೀರ್ವಾದ ಪಡೆದರು. ದೇವಸ್ಯ ಪುರುಷೋತ್ತಮ ಭಟ್ ಮತ್ತು ಕುಟುಂಬ ಸರ್ವಸೇವೆ ನೆರವೇರಿಸಿತು. ಚಾತುರ್ಮಾಸ್ಯ ತಂಡದ ಪ್ರಧಾನ ಸಂಚಾಲಕ ಮಂಜುನಾಥ ಸುವರ್ಣಗದ್ದೆ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿವಿವಿ ಆಡಳಿತಾಧಿಕಾರಿ ಡಾ.ಟಿ.ಜಿ.ಪ್ರಸನ್ನ ಕುಮಾರ್, ಹಿರಿಯ ಲೋಕಸಂಪರ್ಕಾಧಿಕಾರಿ ಜಿ.ಕೆ.ಹೆಗಡೆ, ಮಹೇಶ್ ಹೆಗಡೆ, ಮಡಿಕೇರಿಯ ಪುರುಷೋತ್ತಮ ಭಟ್, ನಾರಾಯಣಮೂರ್ತಿ, ಶ್ರೀಮಠದ ಶಾಸ್ತ್ರಿಗಳಾದ ಸುಚೇತನ ಶಾಸ್ತ್ರಿ, ಸುಬ್ರಾಯ ಅಗ್ನಿಹೋತ್ರಿ, ಶ್ರೀಕಾರ್ಯದರ್ಶಿ ಜಿ.ಕೆ.ಮಧು ಮತ್ತಿತರರು ಉಪಸ್ಥಿತರಿದ್ದರು.

**ಹೆಚ್ಚಿನ ಓದಿಗೆ : www.theruralmirror.com**

# ನ್ಯಾನೋ ಯೂರಿಯಾ ಬಳಕೆಗೆ ರೈತರಿಗೆ ಸಲಹೆ

ಕೇಂದ್ರ ಸರ್ಕಾರ ಹರಳು ರೂಪದ ಯೂರಿಯ ಬದಲಾಗಿ ನ್ಯಾನೋ ಯೂರಿಯಾ ಬಳಕೆಗೆ ಹೆಚ್ಚು ಉತ್ತೇಜನ ನೀಡುತ್ತಿದೆ. ಇದರಿಂದ ರೈತರಿಗೆ ಹಣ, ಸಮಯ ಉಳಿತಾಯವಾಗುವುದರ ಜತೆಗೆ ಮಣ್ಣಿನ ಫಲವತ್ತತೆಯನ್ನೂ ಕಾಪಾಡಬಹುದಾಗಿದೆ ಎಂದು ದಾವಣಗೆರೆ ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕ ಶ್ರೀಧರಮೂರ್ತಿ ಹೇಳಿದ್ದಾರೆ. ದಾವಣಗೆರೆ ತಾಲೂಕಿನ ಹೊನ್ನೂರು ಗ್ರಾಮದಲ್ಲಿ ಕೃಷಿ ಇಲಾಖೆ, ಇಫ್ಕೋ ಸಂಸ್ಥೆಯಿಂದ ಆಯೋಜಿಸಲಾಗಿದ್ದ ಡ್ರೋಣ್ ಮೂಲಕ ನ್ಯಾನೋ ಯೂರಿಯಾ ಸಿಂಪಡಣೆ ಆಂದೋಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

# ಹೃದಯ ಸಂಬಂಧಿ ಕಾಯಿಲೆ ಆತಂಕ ಹಾಸನದಲ್ಲಿ ಮಕ್ಕಳಿಗೆ ಉಚಿತ ಆರೋಗ್ಯ ಶಿಬಿರ

ಹೃದಯ ಸಂಬಂಧಿ ಕಾಯಿಲೆಗಳಿಂದಾಗಿ ಹಾಸನ ಜಿಲ್ಲೆಯಲ್ಲಿ ಆತಂಕ ಎದುರಾಗಿದೆ. ಸಾರ್ವಜನಿಕರ ಆತಂಕ ದೂರ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್ ರಾಜಣ್ಣ ನಿರ್ದೇಶನದಂತೆ , ಜಿಲ್ಲೆಯಲ್ಲಿರುವ 3 ಸಾವಿರ ಶಾಲೆಗಳಲ್ಲಿ , 1 ರಿಂದ 10 ನೇ ತರಗತಿ ಮಕ್ಕಳಿಗೆ ಉಚಿತ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿತ್ತು. ಜಿಲ್ಲೆಯಲ್ಲಿ ಯುವ ಜನತೆ ಹೆಚ್ಚು ಹೃದಯ ಸಂಬಂಧಿ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಹೀಗಾಗಿ ಎಲ್ಲಾ ಶಾಲೆಗಳಲ್ಲಿ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದೆ. 126 ಮಕ್ಕಳ ಕುಟುಂಬಸ್ಥರಲ್ಲಿ ಹೃದಯ ಸಂಬಂಧಿ ಕಾಯಿಲೆ ಪತ್ತೆಯಾಗಿದ್ದು, ಆ ಕುಟುಂಬಗಳ ಮಕ್ಕಳಿಗೆ ಹೆಚ್ಚಿನ ತಪಾಸಣೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಲತಾ ಕುಮಾರಿ ತಿಳಿಸಿದ್ದಾರೆ.

**ಹೆಚ್ಚಿನ ಓದಿಗೆ : www.theruralmirror.com**